ಆ) ಉದ್ಭವಿಸುವುದಿಲ್ಲ.

ಶ್ರೀ ಎಂ. ಶಿವಾನಂದ್ : ಮಾನ್ಯ ಅಧ್ಯಕ್ಷರೆ, ನಮ್ಮ ಚಿಕ್ಕಬಳ್ಳಾಪುರ ತಾಲೂಕಿಗೆ ಕೋರ್ಟ್ ಕಾಂಪ್ಲೆಕ್ಸ್‌ನ್ನು ಮಂಜೂರು ಮಾಡಿದ್ದೇವೆಂದು ಹಿಂದಿನ ಮಾನ್ಯ ಮುಖ್ಯ ಮಂತ್ರಿಗಳು ತಿಳಿಸಿದ್ದರು. ಆಗ ಸಂಬಂಧಪಟ್ಟ ಅಧಿಕಾರಿಗಳನ್ನು ವಿಚಾರಿಸಿದಾಗ ಇದು ಅಡ್ಮಿನಿಸ್ಟ್ರೇಟಿವ್ ಅಪ್ರೂವಲ್‌ಗೆ ವಿಷಯ ಹೋಗಿದೆ ಎಂದು ಹೇಳಿದ್ದರು. ಈಗ ಸರ್ಕಾರದ ವತಿಯಿಂದ ಕೊಟ್ಟಿರುವ ಉತ್ತರವನ್ನು ನೋಡಿದರೆ ಉದ್ಭವಿಸುವುದಿಲ್ಲ ಎಂದು ಹೇಳಿದ್ದಾರೆ. ಆದ್ದರಿಂದ ತಮ್ಮ ಮೂಲಕ ವಿನಂತಿ ಮಾಡಿಕೊಳ್ಳುವುದೇನೆಂದರೆ, ಸಾಧ್ಯವಾದಷ್ಟು ಬೇಗನೆ ಕೆಲಸವನ್ನು ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಶ್ರೀ ಎಂ.ಸಿ. ನಾಣಯ್ಯ : ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಕೋರ್ಟ್ ಕಾಂಪ್ಲೆಕ್ಸ್ ಮಂಜೂರಾಗಿದೆಯೇ ಎಂದು ಕೇಳಿರುವ ಪ್ರಶ್ನೆಗೆ ಇಲ್ಲ ಎಂದು ಹೇಳಿದ್ದಾರೆ ಚಿಕ್ಕಬಳ್ಳಾಪುರದಲ್ಲಿ ಒಂದು ಕೋರ್ಟ್ ಕಾಂಪ್ಲೆಕ್ಸ್‌ನ್ನು ನಿರ್ಮಾಣ ಮಾಡುವುದಕ್ಕೆ ಸುಮಾರು ಒಂದು ಕೋಟಿ ರೂಪಾಯಿಗಳ ಪ್ಲಾನ್‌ಮತ್ತು ಎಸ್ಟಿಮೇಟನ್ನು ತಯಾರಿಸಿ ಹೈ ಕೋರ್ಟಿಗೆ ಕಳುಹಿಸಿದ್ದಾರೆ. ಇದು ಉಚ್ಚ ನ್ಯಾಯಾಲಯದಿಂದ ನಮ್ಮ ಇಲಾಖೆಗೆ ಬರಬೇಕಾಗುತ್ತದೆ. ಅಲ್ಲಿಂದ ಆರ್ಥಿಕ ಇಲಾಖೆಗೆ ಹೋಗಬೇಕಾಗುತ್ತದೆ. ಅಲ್ಲಿ ಅದಕ್ಕೆ ಆಡಳಿತಾತ್ಮಕ ಮಂಜೂರಾತಿಯನ್ನು ಕೊಡಬೇಕಾಗುತ್ತದೆ. ಅದು ಹೈಕೋರ್ಟ್‌ನಿಂದ ಬಂದ ಮೇಲೆ ಇದರ ಬಗ್ಗೆ ಮುಂದಿನ ಕ್ರಮವನ್ನು ತೆಗೆದುಕೊಳ್ಳುತ್ತೇನೆ.

ಅಧ್ಯಕ್ಷರು : ಮಾನ್ಯ ಮಂತ್ರಿಗಳು ಅದನ್ನು ಮಾಡಿಸುತ್ತಾರೆ ಬಿಡಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, 12ನೇ ಆಗಸ್ಟ್ 1996ರಂದು ಲಿಖಿತ ಮೂಲಕ ಉತ್ತರಿಸಬೇಕಾದ 26ನೇ ಪಟ್ಟಿಯ 84 ಪ್ರಶ್ನೆಗಳ ಪೈಕಿ 65 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಔಷಧಿಗಳ ವಿತರಣೆಯ ವೆಚ್ಚ

2111 - ಶ್ರೀ ಅಶೋಕ. ಎಸ್.ಕಾಟವೆ (ಹುಬ್ಬಳ್ಳಿ ನಗರ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) 1994-95 ಹಾಗೂ 1995-96ನೇ ಸಾಲಿನಲ್ಲಿ ಹುಬ್ಬಳ್ಳಿಯ ಎಲ್ಲಾ ಕಾ.ರಾ.ವಿ. ಆಸ್ಪತ್ರೆಗಳಲ್ಲಿ ವೈದ್ಯರು ರೋಗಿಗಳಿಗೆ ವಿತರಿಸಲಾದ ಔಷಧಿಗಳ ವೆಚ್ಚವೆಷ್ಟು?

ಶ್ರೀ ಬಿ. ಸತ್ಯನಾರಾಯಣ (ಕಾರ್ಮಿಕ ಸಚಿವರು) :

ಅ) 1994-95ನೇ ಸಾಲಿನಲ್ಲಿ ರೂ. 18,50,287-00 (ರೂ. ಹದಿನೆಂಟು ಲಕ್ಷದ ಐವತ್ತು ಸಾವಿರದ ಎರಡು ನೂರ ಎಂಭತ್ತೇಳು) ಹಾಗೂ

1995-96ನೇ ಸಾಲಿನಲ್ಲಿ ರೂ. 16.42,795-00 (ರೂ. ಹದಿನಾರು ಲಕ್ಷದ ನಲವತ್ತೆರಡು ಸಾವಿರದ ಏಳುನೂರ ತೊಂಭತ್ತೈದು, ಮೌಲ್ಯದ ಔಷಧಿಯನ್ನು ವಿತರಿಸಲಾಗಿರುತ್ತದೆ.

ಪರಿಶಿಷ್ಟ ಜಾತಿ ಜನರಿಗೆ ಒದಗಿಸಲಾದ ಟಿ.ವಿ. ಸೆಟ್ಟುಗಳು.

2405 - ಶ್ರೀ ಬಸನಗೌಡ ರಾ. ಪಾಟೀಲ್ (ವಿಜಾಪುರ) : ಮಾನ್ಯ ವಾರ್ತಾ ಮತ್ತು ಪ್ರಚಾರ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಜನರಿರುವ ಪ್ರದೇಶಗಳಿಗೆ ಎಷ್ಟು (ಬಣ್ಣದ) ಟಿ.ವಿ. ಗಳನ್ನು ಒದಗಿಸಲಾಗಿದೆ? (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು).

ಆ) ವಿಜಾಪುರ ತಾಲ್ಲೂಕಿನಲ್ಲಿ ಇನ್ನೂ ಎಷ್ಟು ಗ್ರಾಮಗಳಿಗೆ ಈ ಸೌಲಭ್ಯದ ಅವಶ್ಯಕತೆ ಇದೆ?

ಇ) ಈ ಬಗ್ಗೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎಂ.ಸಿ. ನಾಣಯ್ಯ (ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) 43 ಬಣ್ಣದ ದೂರದರ್ಶನ ಸೆಟ್ಟುಗಳು.

ವಿಧಾನಸಭಾ ಕ್ಷೇತ್ರವಾರು ವಿವರ ಈ ಕೆಳಗಿನಂತಿದೆ.

1)	ಜಮಖಂಡಿ	-	1
2)	ಬೀಳಗಿ	-	1
3)	ಮುದ್ದೋಳ್ (ಮೀಸಲು	-	3
4)	ಬಾಗಲಕೋಟೆ	-	1
5)	ಬಾದಾಮಿ	-	-
6)	ಗುಳೇದಗುಡ್ಡ	-	1
7)	ಹುನಗುಂದ	-	-
8)	ಮುದ್ದೆಬೀಹಾಳ್	-	1
9)	ಬಸವನಬಾಗೇವಾಡಿ	-	5
10)	ಹೂವಿನ ಹಿಪ್ಪರಗಿ	-	-
11)	ತಿಕೋಟ	-	14
12)	ವಿಜಾಪುರ	-	3
13)	ಬಳ್ಳೊಳ್ಳಿ (ಮಿ)	-	10
14)	ಇಂಡಿ	-	2
15)	ಸಿಂಧಗಿ	-	1
	ಒಟ್ಟು		**43**

ಆ) 118 ಗ್ರಾಮ.

ಇ) ಹಂತ ಹಂತವಾಗಿ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಪತ್ರಕರ್ತರಿಗೆ ನೀಡುತ್ತಿರುವ ಸೌಲಭ್ಯಗಳು

1602 - ಶ್ರೀ ಬಸನಗೌಡ ರಾ. ಪಾಟೀಲ (ವಿಜಾಪುರ) : ಮಾನ್ಯ ವಾರ್ತಾ ಮತ್ತು ಪ್ರಚಾರ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?